**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 69 ಸಿ.ಜಿ.ಎಂ. 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:04.04.2020

**ಸುತ್ತೋಲೆ**

ವಿಷಯ: ರಾಜ್ಯದಲ್ಲಿ ಕೋವಿಡ್-19 ಕುರಿತಂತೆ ತಮ್ಮ ಜಿಲ್ಲೆಗಳಲ್ಲಿ ನಿರ್ಮಾಣವಾಗಬಹುದಾದ ಮುಂದಿನ ಹಂತದ ತುರ್ತು ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ನಿಭಾಯಿಸುವ ಬಗ್ಗೆ.

* * *

ರಾಜ್ಯದಲ್ಲಿ ಕೋವಿಡ್-19 ಕುರಿತಂತೆ ನಿರ್ಮಾಣವಾಗಬಹುದಾದ ಮುಂದಿನ ಹಂತದ ತುರ್ತು ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ನಿಭಾಯಿಸಲು ಆಪತ್ಕಾಲಿಕ ಯೋಜನೆ (Contingency Plan)ಯ ಅವಶ್ಯಕತೆಯನ್ನು ಮನಗಂಡು ವೈದ್ಯಕೀಯ ಕ್ಷೇತ್ರದಲ್ಲಿ ಪರಿಣಿತ ತಜ್ಞ ವೈದ್ಯರುಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಿ, ಆ ಸಮಿತಿಯ ಶಿಫಾರಸ್ಸುಗಳನ್ವಯ ಆಪತ್ಕಾಲಿಕ ಯೋಜನೆ (Contingency Plan) ಯನ್ನು ಸಿದ್ಧಪಡಿಸಿದ್ದು, ಸದರಿ ಆಪತ್ಕಾಲಿಕ ಯೋಜನೆ (Contingency Plan) ಯಡಿ ಬೇಕಾಗುವ ಮೂಲಭೂತ ಸೌಕರ್ಯ, ಮಾನವ ಸಂಪನ್ಮೂಲ, ಪ್ರಮಾಣಿತ ಕಾರ್ಯಚಟುವಟಿಕೆ ವಿಧಾನಗಳು (Standard Operating Procedures) ಕ್ರೋಢೀಕರಿಸಿ ಅದರಂತೆ ಕ್ರಮ ತೆಗೆದುಕೊಳ್ಳುವುದು ಅವಶ್ಯವಾಗಿರುತ್ತದೆ.

ಆದ್ದರಿಂದ ಅಂತಹ ತುರ್ತು ಪರಿಸ್ಥಿತಿಯನ್ನು ಎದುರಿಸಲು ಜಿಲ್ಲಾಡಳಿತಗಳು ಸನ್ನದ್ಧವಾಗಿರುವುದು ಅವಶ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಪರಿಣಿತರು ಸಿದ್ಧಪಡಿಸಿರುವ ಆಪತ್ಕಾಲಿಕ ಯೋಜನೆ (Contingency Plan)ಯನ್ನು ಇದರೊಂದಿಗೆ ಲಗತ್ತಿಸಿದ್ದು, ಇದೊಂದು ವಿಶಾಲ ಮುನ್ನೂಹೆ ಯೋಜನೆಯಾಗಿದ್ದು, ತಮ್ಮ ಜಿಲ್ಲೆಯ ಸ್ಥಳೀಯ ಅವಶ್ಯಕತೆ ಅನುಗುಣವಾಗಿ ತಿದ್ದುಕೊಂಡು ರೂಪಿಸಿಕೊಳ್ಳಬಹುದಾಗಿದೆ. ಅದರಲ್ಲಿ ನೀಡಲಾಗಿರುವ ನಿರ್ದೇಶನಗಳನ್ವಯ ತಮ್ಮ ಜಿಲ್ಲೆಗಳಲ್ಲಿ ಅಂತಹ ತುರ್ತು ಪರಿಸ್ಥಿತಿ ಎದುರಾದ ಸಂದರ್ಭದಲ್ಲಿ ಅವಶ್ಯಕತೆಗನುಸಾರವಾಗಿ ಮೂಲಭೂತ ಸೌಕರ್ಯ, ಶಿಷ್ಟಾಚಾರ ಹಾಗೂ ಸಂಪನ್ಮೂಲಗಳನ್ನು ಸಿದ್ಧಪಡಿಸಿಕೊಂಡು ಇಲ್ಲಿ ವಿವರಿಸಿರುವ ರೀತಿಯಲ್ಲಿ ಹಾಗೂ ನಿಗದಿತ ಸಮಯದಲ್ಲಿ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ಒಂದು ವೇಳೆ ತಮ್ಮ ಜಿಲ್ಲೆಯಲ್ಲಿ ಸಮರ್ಪಿಸಿದ ಕೋವಿಡ್-19 ಆಸ್ಪತ್ರೆಗೆ ಬೇಕಾಗುವ ಸವಲತ್ತುಗಳು ಇಲ್ಲದ ಪಕ್ಷದಲ್ಲಿ ತಮ್ಮ ಜಿಲ್ಲೆಯ ಯೋಜಿತ ಪ್ರಕರಣಗಳ (Case Load) ಭಾರವನ್ನು ತಮ್ಮ ನೆರೆಹೊರೆಯ ಸವಲತ್ತುಗಳುಳ್ಳ ಜಿಲ್ಲೆಯ ಯೋಜಿತ ಪ್ರಕರಣ (Case Load) ನೊಂದಿಗೆ ಸೇರಿಸಿ ಅದರಂತೆ ಯೋಜನೆಯನ್ನು ಸಿದ್ಧಪಡಿಸಿಕೊಂಡು ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ.

(ಜಾವೇದ್ ಅಖ್ತರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ.

**ಇವರಿಗೆ:**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
2. ಎಲ್ಲಾ ಜಿಲ್ಲೆಗಳ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳಿಗೆ.
3. ಎಲ್ಲಾ ಜಿಲ್ಲೆಗಳ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳಿಗೆ.

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1. ಆಯುಕ್ತರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದ್‌ರಾವ್ ವೃತ್ತ, ಬೆಂಗಳೂರು.
2. ಅಪರ ನಿರ್ದೇಶಕರು, ಕೆ.ಡಿ.ಎಲ್.ಡಬ್ಲ್ಯೂ.ಎಸ್.
3. ನಿರ್ದೇಶಕರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದ್‌ರಾವ್ ವೃತ್ತ, ಬೆಂಗಳೂರು.